ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಬನಹಟ್ಟಿ

ಸಿ.ಸಿ.ನಂ.**2594/2024**

1) ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ ನಿ., ತೇರದಾಳ,
ಪ್ರತಿನಿಧಿಸುವವರು,
ಶಿವಾನಂದ ತಂ: ಗುರುಪಾದಯ್ಯಾ ಹೊರಗಿನಮಠ,
ಸಾ: ತೇರದಾಳ, ತಾ: ರಬಕವಿ-ಬನಹಟ್ಟಿ

.....ಫಿರ್ಯಾದಿದಾರ

– ವಿರುದ್ಧ –

1) ಸುನೀತಾ ಗಂ: ರಾಘವೇಂದ್ರ ಹಾರೂಗೊಪ್ಪ,
ಸಾ: ತೇರದಾಳ, ತಾ: ರಬಕವಿ-ಬನಹಟ್ಟಿ

......ಆರೋಪಿ

– ಆಪಾದನೆ –

ನಾನು ಶ್ರೀಮತಿ ಸೌಮ್ಯ ಹೂಲಿ. ಬಿ.ಎ., ಎಲ್.ಎಲ್.ಬಿ., ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂಡಾಧಿಕಾರಿಗಳು ಬನಹಟ್ಟಿ , ತಾ:ರಬಕವಿ-ಬನಹಟ್ಟಿ ಹೊರೆಸುವ ಆಪಾದನೆ ಏನೆಂದರೆ,

ಆರೋಪಿತರಾದ ನೀವು ಪಿರ್ಯಾದುದಾರರ ಸೊಸೈಟಿಗೆ ಕಾನೂನುಬದ್ಧವಾಗಿ ಕೊಡಬೇಕಾಗಿದ್ದ ರೂ.3,65,696/- ಗಳ ಪಾವತಿಗಾಗಿ ನಿಮ್ಮ ಖಾತೆ ಇರುವ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾ, ಶಾಖೆ ತೇರದಾಳ ಬ್ಯಾಂಕಿನ ಚೆಕ್ ನಂ.797441 ನ್ನು ರೂ.3,65,696/- ಗಳಿಗೆ 20.08.2024 ರ ದಿನಾಂಕ ನಮೂದಿಸಿ ಫಿರ್ಯಾದಿದಾರರಿಗೆ ನೀಡಿದ್ದು, ಅವರು ಅದನ್ನು ತಮ್ಮ ಬ್ಯಾಂಕಿನ ಮೂಲಕ ನಗದೀಕರಿಸಲು ಹಾಕಿದಾಗ ನಿಮ್ಮ ಬ್ಯಾಂಕಿನವರು **"Funds Insufficient"** ಎನ್ನುವ ಹಿಂಬರಹದೊಂದಿಗೆ ಸದರಿ ಚೆಕ್ಕು ನಗದೀಕರಣವಾಗದೇ ವಾಪಸ್ಸು ಬಂದಿದ್ದು, ಆ ಬಗ್ಗೆ ಫಿರ್ಯಾದಿದಾರರು ತಮ್ಮ ವಕೀಲರ ಮೂಲಕ ದಿನಾಂಕ 06.09.2024 ರಂದು ನಿಮಗೆ ಲೀಗಲ್ ನೋಟೀಸ್ ನೀಡಿದ್ದು, ಸದರಿ ನೋಟೀಸನ್ನು ನೀವು ದಿನಾಂಕ:09.09.2024 ರಂದು ಸ್ವೀಕರಿಸಿದ್ದು, ನಂತರ 15 ದಿನಗಳು ಕಳೆದರೂ ಸಹ ನೀವು ಚೆಕ್ಕಿನಲ್ಲಿ ನಮೂದಿಸಿದ ಹಣ ಪಾವತಿಸದೇ ಲಿಖಿತ ವರ್ಗಾವಣೆಗಳ ಕಾಯ್ದೆ (N.I.Act) ಕಲಂ.138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿ ಅಂತಾ ಆಪಾದಿಸಲಾಗಿದೆ.

ಪ್ರಶ್ನೆ-1) ಈಗ ಓದಿ ಹೇಳಲಾದ ಆರೋಪಣೆ ತಿಳಿಯಿತೆ ?

ಉತ್ತರ:- ತಿಳಿಯಿತು

ಪ್ರಶ್ನೆ-2) ಸದರಿ ಆರೋಪಣೆಯನ್ನು ಒಪ್ಪಿ ಕೊಳ್ಳುವಿರೋ ಅಥವಾ ವಿಚಾರಣೆ ಆಗಪಲು ಬಯಸುವಿರೊ ?

ಉತ್ತರ:- ವಿಚಾರಣೆ ಆಗಬೇಕು

ಮೇಲೆ ಹೇಳಲಾದ ಆರೋಪಣೆಯನ್ನು ಆರೋಪಿತನಿಗೆ ತಿಳಿಯುವ ಭಾಷೆಯಲ್ಲಿ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಅವರ ಭಾಷೆಯಲ್ಲಿ ಬರೆದುಕೊಳ್ಳಲಾಯಿತು ಎಂದು ದೃಢೀಕರಿಸಲಾಗಿದೆ.

Sd/-
ಪ್ರ.ದ.ನ್ಯಾ. ದಂಡಾಧಿಕಾರಿಗಳು,
ಬನಹಟ್ಟಿ

ಸ್ಥಳ : ಬನಹಟ್ಟಿ
ದಿನಾಂಕ : 28.01.2026

ಆರೋಪಿಯ ಸಹಿ